**All India Radio: Bangalore**
**Regional Bulletin In Kannada**
**28.03.2026 / 2.30 p.m.**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**28.03.2026 / 2.30 p.m.**

**<><><><>**

ಮುಖ್ಯಾಂಶಗಳು

1. ವಿದ್ಯಾರ್ಥಿಗಳು ತಮ್ಮ ಶಿಕ್ಷಣ ಹಾಗೂ ಪ್ರತಿಭೆಯನ್ನು ಮಾನವ ಕಲ್ಯಾಣಕ್ಕೆ ಬಳಸುವಂತೆ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಕರೆ
2. ಮೇಲುಕೋಟೆಯ ವಿಶ್ವ ಪ್ರಸಿದ್ಧ ವೈರಮುಡಿ ಉತ್ಸವಕ್ಕೆ ಕ್ಷಣಗಣನೆ
3. ವಯೋವೃದ್ಧ ದಸರಾ ಆನೆ ಗಜೇಂದ್ರ ಸಂರಕ್ಷಣೆಗಾಗಿ ಸುಸಜ್ಜಿತ ಶಿಬಿರಕ್ಕೆ ವರ್ಗಾಯಿಸಲು ಅರಣ್ಯ ಸಚಿವ ಈಶ್ವರ್ ಖಂಡ್ರೆ ಸೂಚನೆ
4. ಐಪಿಎಲ್ ಟಿ-೨೦ ಕ್ರಿಕೆಟ್ : ೧೯ನೇ ಆವೃತ್ತಿಯ ಉದ್ಘಾಟನಾ ಪಂದ್ಯಕ್ಕೆ ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣ ಸಜ್ಜು ; ನಿಯಮ ಪಾಲಿಸುವಂತೆ ಪೊಲೀಸ್ ಆಯುಕ್ತ ಸೀಮಂತ್ ಕುಮಾರ್ ಮನವಿ

<><><><>

ವಿಶ್ವ ವಿದ್ಯಾನಿಲಯಗಳಿಂದ ಪದವಿ ಪಡೆದು ಹೊರ ಬರುವ ವಿದ್ಯಾರ್ಥಿಗಳು ದೇಶದ ಆಸ್ತಿಯಾಗಬೇಕು; ದೇಶ ಮತ್ತು ಸಮಾಜದ ನಿರೀಕ್ಷೆಗಳಿಗೆ ತಕ್ಕಂತೆ ನಡೆದು ತಮ್ಮ ಶಿಕ್ಷಣ, ಪ್ರತಿಭೆಯನ್ನು ಮಾನವ ಕಲ್ಯಾಣಕ್ಕಾಗಿ ಬಳಸಬೇಕು ಎಂದು ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಕರೆ ನೀಡಿದ್ದಾರೆ. ಮಂಗಳೂರು ವಿಶ್ವವಿದ್ಯಾನಿಲಯದ ೪೪ನೇ ವಾರ್ಷಿಕ ಘಟಿಕೋತ್ಸವದಲ್ಲಿಂದು ಸಾಧಕ ವಿದ್ಯಾರ್ಥಿಗಳಿಗೆ ರ್‍ಯಾಂಕ್ ಜೊತೆಗೆ ಚಿನ್ನದ ಪದಕ ಮತ್ತು ಪದವಿ ಪ್ರದಾನ ನೆರವೇರಿಸಿ ಮಾತನಾಡಿದ ಅವರು, ತಮ್ಮ ಶಿಕ್ಷಣದ ಪ್ರಯಾಣಕ್ಕೆ ಮಾರ್ಗದರ್ಶನ ನೀಡಿದ ತಾಯಿ-ತಂದೆ, ಗುರುಗಳಿಗೆ ಗೌರವ ಸಲ್ಲಿಸುವುದು ಪ್ರತಿಯೊಬ್ಬ ವಿದ್ಯಾರ್ಥಿಯ ಕರ್ತವ್ಯ ಎಂದರು. ಪದವಿ ಶಿಕ್ಷಣ ಪೂರ್ಣಗೊಂಡ ನಂತರ ವಿದ್ಯಾರ್ಥಿಗಳು ವಿವಿಧ ಕ್ಷೇತ್ರಗಳಲ್ಲಿ ತೊಡಗಿಕೊಳ್ಳಲಿದ್ದು, ಈ ಸಂದರ್ಭ ತಮ್ಮ ಜವಾಬ್ದಾರಿಯನ್ನು ಮರೆಯಬಾರದು. ಪ್ರತಿಯೊಂದು ಕ್ಷೇತ್ರದಲ್ಲೂ ವಿಭಿನ್ನ ಸಾಮರ್ಥ್ಯ ಮತ್ತು ಕೌಶಲ್ಯಗಳ ಅಗತ್ಯವಿದ್ದರೂ, ನಿರಂತರವಾಗಿ ಕಲಿಯುವ ಮನೋಭಾವ, ನೈತಿಕ ಮೌಲ್ಯಗಳ

ಪಾಲನೆ, ಸತ್ಯನಿಷ್ಠೆ, ಕಠಿಣ ಪರಿಸ್ಥಿತಿಗಳಲ್ಲಿ ಧೈರ್ಯದಿಂದ ಎದುರಿಸುವ ಶಕ್ತಿ, ತಂಡದ ಕೆಲಸ ಮತ್ತು ಸಮಯ-ಸಂಪನ್ಮೂಲಗಳ ಸಮರ್ಪಕ ಬಳಕೆ ಮುಂತಾದ ಗುಣಗಳು ಯಶಸ್ಸಿಗೆ ಅಗತ್ಯ ಎಂದು ತಿಳಿಸಿದರು. ವಿದ್ಯಾರ್ಥಿಗಳು ತಮ್ಮ ಜ್ಞಾನ ಮತ್ತು ಸಾಮರ್ಥ್ಯವನ್ನು ಸಮಾಜ ಹಾಗೂ ರಾಷ್ಟ್ರದ ಹಿತಕ್ಕಾಗಿ ಬಳಸಬೇಕು. ಇಂತಹ ಗುಣಗಳು ಅವರನ್ನು ಒಳ್ಳೆಯ ವೃತ್ತಿಪರರನ್ನಾಗಿ ಮಾತ್ರವಲ್ಲ, ಜವಾಬ್ದಾರಿಯುತ ಮತ್ತು ಸಂವೇದನಾಶೀಲ ನಾಗರಿಕರನ್ನಾಗಿ ರೂಪಿಸುತ್ತವೆ ಎಂದು ರಾಜ್ಯಪಾಲರು ಹೇಳಿದರು. ಘಟಿಕೋತ್ಸವ ಭಾಷಣ ಮಾಡಿದ ಸಂಸದ ಕ್ಯಾಪ್ಟನ್ ಬ್ರಿಜೇಶ್ ಚೌಟ, ಪದವಿ ಪಡೆದು ಹೊರ ಬರುವ ವಿದ್ಯಾರ್ಥಿಗಳು ತಮ್ಮ ಜವಾಬ್ದಾರಿಯನ್ನು ಮರೆಯಬಾರದು. ಸಮಾಜಕ್ಕೆ ತಮ್ಮಿಂದಾದ ಕೊಡುಗೆ ನೀಡಬೇಕು. ಈ ಮಣ್ಣಿನ ಅಸ್ಮಿತೆ ಉಳಿಸುವ ಕೆಲಸ ಮಾಡಬೇಕು ಎಂದರು. ಇದೇ ಸಂದರ್ಭದಲ್ಲಿ ಅಕ್ಷರ ಸಂತ ಹರೇಕಳ ಹಾಜಬ್ಬ, ದೈವ ನರ್ತಕ ಡಾ.ರವೀಶ್ ಪಡುಮಲೆ ಅವರಿಗೆ ಗೌರವ ಡಾಕ್ಟರೇಟ್ ಪ್ರದಾನಿಸಲಾಯಿತು. ವಿಶ್ವವಿದ್ಯಾನಿಲಯದ ಕುಲಪತಿ ಪ್ರೊ.ಪಿ.ಎಲ್.ಧರ್ಮ, ಕುಲಸಚಿವ ಪ್ರೊ.ದೇವೇಂದ್ರಪ್ಪ ಉಪಸ್ಥಿತರಿದ್ದರು.

<><><>

ಮೇಲುಕೋಟೆಯ ವಿಶ್ವ ಪ್ರಸಿದ್ಧ ವೈರಮುಡಿ ಉತ್ಸವಕ್ಕೆ ಕ್ಷಣಗಣನೆ ಪ್ರಾರಂಭವಾಗಿದೆ. ಮಂಡ್ಯ ಜಿಲ್ಲಾ ಖಜಾನೆ ಯಿಂದ ವೈರಮುಡಿಯನ್ನು ಸಕಲ ಸರ್ಕಾರಿ ಗೌರವದೊಂದಿಗೆ ಬಿಗಿ ಭದ್ರತೆಯಲ್ಲಿ ಕೊಂಡೊಯ್ಯಲಾಗಿದೆ. ಇಂದು ಬೆಳಗ್ಗೆ ೭.೪೫ರ ಶುಭ ಮುಹೂರ್ತದಲ್ಲಿ ಮಂಡ್ಯ ನಗರದ ಜಿಲ್ಲಾ ಖಜಾನೆಯಿಂದ ಜಿಲ್ಲಾಧಿಕಾರಿ ಡಾ.ಕುಮಾರ ಮತ್ತು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶೋಭಾರಾಣಿ ಅವರು ತಲೆ ಮೇಲೆ ಹೊತ್ತು ತಂದು ಖಜಾನೆ ದ್ವಾರದಲ್ಲಿರಿಸಿ ಪೂಜೆ ನೆರವೇರಿಸಿದರು. ವೈರಮುಡಿಗೆ ಮಂಡ್ಯ ನಗರದ ಲಕ್ಷ್ಮಿಜನಾರ್ಧನ ದೇವಾಲಯದಲ್ಲಿ ಪೂಜೆ ಸಲ್ಲಿಸಲಾಗಿದ್ದು, ಶ್ರೀರಂಗಪಟ್ಟಣ, ಪಾಂಡವಪುರ ಮಾರ್ಗವಾಗಿ ಸಂಜೆ ಐದು ಗಂಟೆ ವೇಳೆಗೆ ಮೇಲುಕೋಟೆ ತಲುಪಲಿದೆ. ಹೋಗುವ ಮಾರ್ಗದುದ್ದಕ್ಕೂ, ಗ್ರಾಮಗಳಲ್ಲಿ ಪೂಜೆ ಸಲ್ಲಿ ಸಲಾಗುತ್ತದೆ. ವೈರಮುಡಿಗೆ ದೇಗುಲದ ಆವರಣದಲ್ಲಿ ವಿಶೇಷ ಪೂಜೆ ಸಲ್ಲಿಸಿದ ನಂತರ ಉನ್ನತ ಅಧಿಕಾರಿಗಳ ಸಮ್ಮುಖದಲ್ಲಿ ಆಭರಣಗಳ ಪರ್ಕಾವಣೆ ನಡೆಸಿ ದೇವರಿಗೆ ತೊಡಿಸಲಾಗುತ್ತದೆ. ಬಳಿಕ ರಾತ್ರಿ ೮ ಗಂಟೆ ನಂತರ ವಜ್ರ ಖಚಿತ ವೈರಮುಡಿ ತೊಡಿಸಿದ ಚಲುವನಾರಾಯಣಸ್ವಾಮಿ ಉತ್ಸವ ಮೇಲುಕೋಟೆಯ ರಾಜಬೀದಿಗಳಲ್ಲಿ ಸಂಚರಿಸಲಿದೆ.

<><><>

ಹಲವು ದಸರಾಗಳಲ್ಲಿ ಭಾಗಿಯಾಗಿ ಸದ್ಯ ಏಕಾಂಗಿಯಾಗಿರುವ ವಯೋವೃದ್ಧ ಗಜೇಂದ್ರ ಆನೆಯನ್ನು ಸಂರಕ್ಷಣೆ ದೃಷ್ಟಿಯಿಂದ ಸುಸಜ್ಜಿತ ಶಿಬಿರಕ್ಕೆ ವರ್ಗಾಯಿಸಲು ಅರಣ್ಯ ಸಚಿವ ಈಶ್ವರ್ ಖಂಡ್ರೆ ಸೂಚಿಸಿದ್ದಾರೆ. ಸದ್ಯ ಚಾಮರಾಜನಗರ ತಾಲೂಕಿನ ಬಿಆರ್‌ಟಿ ಹುಲಿ ಸಂರಕ್ಷಿತ ಪ್ರದೇಶದ ಬೂದಿಪಡಗದಲ್ಲಿರುವ ಸಾಕಾನೆ ಗಜೇಂದ್ರನಿಗೆ ೭೫ ವರ್ಷಗಳಾಗಿದ್ದು, ಕಳೆದ ಹಲವಾರು ವರ್ಷಗಳಿಂದ ಏಕಾಂಗಿ ಆಗಿದೆ. ಈ ಹಿಂದೆ ಗಜೇಂದ್ರ ಕೆ.ಗುಡಿಯಲ್ಲಿದ್ದ ಸಂದರ್ಭದಲ್ಲಿ ದುರ್ಗಾಪರಮೇಶ್ವರಿ ಆನೆ ಜೊತೆಗಿತ್ತು. ಈಗ ಆ ಆನೆಯೂ ಕೂಡ ಬೇರೆ ಶಿಬಿರದಲ್ಲಿದ್ದು ಗಜೇಂದ್ರ ೫-೬ ವರ್ಷಗಳಿಂದ ಒಂಟಿಯಾಗಿದೆ. ವಯಸ್ಸಿನ ಕಾರಣ ದೈಹಿಕ ಸಾಮರ್ಥ್ಯ ಕೂಡ ಕ್ಷೀಣಿಸಿದೆ. ಕಾಡಿಗೆ ನಿತ್ಯವೂ ಮೇಯಲು ಬಿಟ್ಟ ಸಂದರ್ಭದಲ್ಲಿ ಬಲಿಷ್ಠ ಕಾಡಾನೆಗಳಿಂದ ಗಜೇಂದ್ರನಿಗೆ ಅಪಾಯ ಎದುರಾಗುವ ಹಿನ್ನೆಲೆಯಲ್ಲಿ ಮತ್ತಿಗೋಡು ಇಲ್ಲವೇ ಬೇರೆ ಸುಸಜ್ಜಿತ ಶಿಬಿರಕ್ಕೆ ರವಾನಿಸಬೇಕೆಂದು ಅರಣ್ಯ ಸಚಿವ ಈಶ್ವರ್ ಖಂಡ್ರೆ ಆದೇಶಿಸಿದ್ದಾರೆ.

<><><>

ಬೇಸಿಗೆಯ ತಾಪಮಾನ ಏರುತ್ತಿರುವ ಹಿನ್ನೆಲೆಯಲ್ಲಿ ಕೋಲಾರ ಜಿಲ್ಲೆ ಗಡಿ ಭಾಗದ ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಉಂಟಾಗದಂತೆ ಮುನ್ನೆಚ್ಚರಿಕೆ ವಹಿಸಲು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ. ಪ್ರವೀಣ್ ಪಿ ಬಾಗೇವಾಡಿ ಶ್ರೀನಿವಾಸಪುರ ತಾಲ್ಲೂಕು ಬೈರಗಾನಹಳ್ಳಿ ಗ್ರಾಮ ಪಂಚಾಯತಿ ವ್ಯಾಪ್ತಿಯ ಬೈಕೊತ್ತೂರು ಸೇರಿದಂತೆ ವಿವಿಧ ಗಡಿ ಗ್ರಾಮಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಗ್ರಾಮಗಳಲ್ಲಿ ಹಮ್ಮಿಕೊಳ್ಳಲಾಗಿರುವ ಜಲ ಜೀವನ್ ಮಿಷನ್ ಯೋಜನೆಯಡಿ ಮನೆ ಮನೆಗೆ ನಳ ಸಂಪರ್ಕ ಕಲ್ಪಿಸುವ ಕಾಮಗಾರಿಗಳ ಪ್ರಗತಿಯನ್ನು ಖುದ್ದು ವೀಕ್ಷಿಸಿದರು. ಕಾಮಗಾರಿಗಳನ್ನು ನಿಗದಿತ ಕಾಲಮಿತಿಯೊಳಗೆ ಪೂರ್ಣಗೊಳಿಸಿ, ಸಾರ್ವಜನಿಕರಿಗೆ ಸುಗಮವಾಗಿ ನೀರು ಪೂರೈಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.

<><><>

ಐಪಿಎಲ್ ಟಿ-೨೦ ಕ್ರಿಕೆಟ್‌ನ ೧೯ನೇ ಆವೃತ್ತಿಯ ಉದ್ಘಾಟನಾ ಪಂದ್ಯಕ್ಕೆ ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣ ಸಜ್ಜಾಗಿದೆ. ಉದ್ಘಾಟನಾ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ಹಾಗೂ ಸನ್‌ರೈಸರ್ಸ್ ಹೈದರಾಬಾದ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ಸಂಜೆ ೭.೩೦ಕ್ಕೆ ಆರಂಭವಾಗಲಿದೆ. ಆ ಮೂಲಕ ಮೇ ೩೧ರ ವರೆಗೆ ನಡೆಯಲಿರುವ ಎರಡು ತಿಂಗಳ ಅವಧಿಯ ಈ

ಟೂರ್ನಿಗೆ ಇಂದು ಚಾಲನೆ ದೊರಕಲಿದೆ. ಕಳೆದ ಆವೃತ್ತಿಯ ಆರ್‌ಸಿಬಿ ಗೆಲುವಿನ ಸಂದಭ್ರಮಾಚರಣೆ ವೇಳೆ ನಡೆದ ಮೃತಪಟ್ಟ ಸಂದರ್ಭದಲ್ಲಿ ಸಾವಿಗೀಡಾದ ೧೧ ಕ್ರೀಡಾ ಪ್ರೇಮಿಗಳ ಗೌರವಾರ್ಥ ಚಿನ್ನಸ್ವಾಮಿ ಕ್ರೀಡಾಂಗಣದ ೧೧ ಸೀಟುಗಳನ್ನು ಕಾಯ್ದಿರಿಸಲು ನಿರ್ಧರಿಸಲಾಗಿದೆ. ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡದ ಆಟಗಾರರು ೧೧ ಸಂಖ್ಯೆಯ ಜರ್ಸಿ ಧರಿಸಿ ಗೌರವ ಸಲ್ಲಿಸಲಿದ್ದಾರೆ.

ಮುನ್ನೆಚ್ಚರಿಕಾ ಕ್ರಮವಾಗಿ ಬೆಂಗಳೂರಿನಲ್ಲಿ ಬಿಗಿ ಬಂದೋಬಸ್ತ್ ಏರ್ಪಡಿಸಲಾಗಿದೆ. ಸಾರ್ವಜನಿಕರು ಮೆಟ್ರೋ ಮತ್ತು ಬಿಎಂಟಿಸಿ ಸಾರಿಗೆ ವ್ಯವಸ್ಥೆಯನ್ನು ಬಳಸುವಂತೆ ಪೊಲೀಸರು ಮನವಿ ಮಾಡಿದ್ದಾರೆ. ಪ್ರವೇಶ ಹಾಗೂ ನಿರ್ಗಮನ ದ್ವಾರಗಳ ಸಂಖ್ಯೆಯನ್ನು ದ್ವಿಗುಣಗೊಳಿಸಲಾಗಿದ್ದು, ಈ ಬಾರಿ ೨೨ರಿಂದ ೪೫ ದ್ವಾರಗಳನ್ನು ತೆರೆಯಲಾಗಿದೆ. ಪ್ರೇಕ್ಷಕರು ಟಿಕೆಟ್‌ನಲ್ಲಿ ನೀಡಿರುವ ಸೂಚನೆಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು ಎಂದು ನಗರ ಪೊಲೀಸ್ ಆಯುಕ್ತ ಸೀಮಂತ್ ಕುಮಾರ್ ಸಿಂಗ್ ತಿಳಿಸಿದ್ದಾರೆ. ಚಿನ್ನಸ್ವಾಮಿ ಕ್ರೀಡಾಂಗಣದ ಸುತ್ತಮುತ್ತ ನೋ ಪಾರ್ಕಿಂಗ್ ಇರಲಿದ್ದು, ಬೇರೆಡೆ ಪಾರ್ಕಿಂಗ್ ವ್ಯವಸ್ಥೆ ಮಾಡಲಾಗಿದೆ. ಈ ಬಾರಿ ಆರ್‌ಸಿಬಿ ನಾಯಕ ರಜತ್ ಪಾಟೀದಾರ್ ಸಾರಥ್ಯದಲ್ಲಿ ಕಣಕ್ಕಿಳಿಯುತ್ತಿದ್ದರೆ, ಸನ್‌ರೈಸರ್ಸ್ ಹೈದರಾಬಾದ್ ತಂಡವನ್ನು ಇಶಾನ್ ಕಿಶಾನ್ ಮುನ್ನಡೆಸಲಿದ್ದಾರೆ. ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದ ಹಿನ್ನೆಲೆಯಲ್ಲಿ ಪ್ರಯಾಣಿಕರಿಗೆ ಸುಲಭ ಹಾಗೂ ಸುರಕ್ಷಿತ ಪ್ರಯಾಣಕ್ಕೆ ಅನುಕೂಲವಾಗುವಂತೆ ಮೆಟ್ರೋ ರೈಲು ಸೇವಾ ಅವಧಿಯನ್ನು ಬಿಎಂಆರ್‌ಸಿಎಲ್ ವಿಸ್ತರಿಸಿದೆ. ಇಂದು ಎಲ್ಲಾ ಟರ್ಮಿನಲ್ ನಿಲ್ದಾಣಗಳಿಂದ ಕೊನೆಯ ಮೆಟ್ರೋ ಸೇವೆಯನ್ನು ರಾತ್ರಿ ೧೧ ಗಂಟೆಯಿಂದ ಭಾನುವಾರ ಮುಂಜಾನೆ ೨ ಗಂಟೆಯವರೆಗೆ ವಿಸ್ತರಿಸಲಾಗಿದೆ.

<><><><>

ಬೆಂಗಳೂರು ನಗರ ಜಿಲ್ಲೆಯಲ್ಲಿ ಸುರಕ್ಷಿತ ವೆಬ್ ಪೋರ್ಟಲ್ ಮೂಲಕ ಸ್ವಯಂ-ಗಣತಿಯಲ್ಲಿ ಪಾಲ್ಗೊಳ್ಳಲು ಅವಕಾಶ ಕಲ್ಪಿಸಲಾಗಿದ್ದು ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಂಡು ಜನಗಣತಿಯಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳಬೇಕು ಎಂದು ಬೆಂಗಳೂರು ನಗರ ಜಿಲ್ಲಾಧಿಕಾರಿ ಜಿ.ಜಗದೀಶ್ ತಿಳಿಸಿದ್ದಾರೆ. ಜಿಲ್ಲೆಯಲ್ಲಿ ಮನೆ ಪಟ್ಟಿ ಮತ್ತು ಮನೆಗಣತಿ ಕಾರ್ಯವು ಏಪ್ರಿಲ್ ೧೬ ರಿಂದ ಆರಂಭವಾಗಲಿದ್ದು, ಇದಕ್ಕೂ ಮುನ್ನ ೧೫ ದಿನಗಳ ಮುಂಚಿತವಾಗಿ ಸ್ವಯಂ ಗಣತಿ ಕಾರ್ಯ

ನಡೆಯಲಿದೆ. ಸಾರ್ವಜನಿಕರು se.census.gov.in ಬಳಸಿಕೊಂಡು ತಮ್ಮ ಕುಟುಂಬದ ಸಾಮಾನ್ಯ ಮಾಹಿತಿಯನ್ನು ಆನ್ಲೈನ್ ಮೂಲಕ ಭರ್ತಿ ಮಾಡಲು ಅವಕಾಶ ಕಲ್ಪಿಸಲಾಗಿದೆ. ತಮ್ಮ ಮಾಹಿತಿಯನ್ನು ವೆಬ್ ಪೋರ್ಟ್‌ಲ್‌ನಲ್ಲಿ ಯಶಸ್ವಿಯಾಗಿ ಸಲ್ಲಿಸಿದ ನಂತರ, ಅವರಿಗೆ ಒಂದು ವಿಶಿಷ್ಟ ಸ್ವಯಂ-ಗಣತಿ ಐಡಿ ನೀಡಲಾಗುತ್ತದೆ. ಅದನ್ನು ಮನೆಗೆ ಭೇಟಿ ನೀಡುವ ಗಣತಿದಾರರೊಂದಿಗೆ ಸಾರ್ವಜನಿಕರು ಹಂಚಿಕೊಳ್ಳಬಹುದು ಎಂದು ಜಿಲ್ಲಾಧಿಕಾರಿಗಳು ತಿಳಿಸಿದ್ದಾರೆ.

<><><>

ಮೈಸೂರು ಜಿಲ್ಲೆಯ ಹುಣಸೂರು ತಾಲೂಕಿನಲ್ಲಿ ಪೊಲೀಸರು ನಿನ್ನೆ ರಾತ್ರಿ ಕಾರ್ಯಾಚರಣೆ ನಡೆಸಿ ಅಕ್ರಮವಾಗಿ ಸಂಗ್ರಹಿಸಿಟ್ಟಿದ್ದ ಸುಮಾರು ೧೨ ಕೋಟಿ ರೂಪಾಯಿ ಮೌಲ್ಯದ ಮಾದಕ ವಸ್ತುಗಳನ್ನು ವಶಪಡಿಸಿಕೊಂಡಿದ್ದಾರೆ. ಮೈಸೂರು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸುದ್ದಿಗೋಷ್ಠಿಯಲ್ಲಿ ಇಂದು ಮಾತನಾಡಿ, ಪ್ರಕರಣಕ್ಕೆ ಸಂಬಂಧಿಸಿದಂತೆ ಇಬ್ಬರನ್ನು ವಶಕ್ಕೆ ತೆಗೆದುಕೊಳ್ಳಲಾಗಿದೆ ಎಂದು ತಿಳಿಸಿದ್ದಾರೆ.

<><><>

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರದಲ್ಲಿ ಇಂದು ರಾಷ್ಟ್ರೀಯ ಹಬ್ಬಗಳ ಆಚರಣೆ ಸಮಿತಿ ವತಿಯಿಂದ, ಅಗ್ನಿ ಬನ್ನಿರಾಯಸ್ವಾಮಿ ಜಯಂತಿಯನ್ನು ಆಚರಿಸಲಾಯಿತು. ತಾಲೂಕು ಕಚೇರಿ ಸಭಾಂಗಣದಲ್ಲಿ ನಡೆದ ಸಮಾರಂಭದಲ್ಲಿ ಶಾಸಕ ಧೀರಜ್ ಮುನಿರಾಜು ಅಗ್ನಿ ಬನ್ನಿರಾಯಸ್ವಾಮಿ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡುವ ಮೂಲಕ ಗೌರವ ನಮನ ಸಲ್ಲಿಸಿದರು. ಅಗ್ನಿ ಬನ್ನಿರಾಯಸ್ವಾಮಿ ಅವರು ಮನುಕುಲಕ್ಕೆ ನೀಡಿರುವ ಕೊಡುಗೆಯನ್ನು ಸ್ಮರಿಸಬೇಕಿದೆ ಎಂದು ಈ ಸಂದರ್ಭದಲ್ಲಿ ತಿಳಿಸಿದರು.

<><><>

ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಅಬಕಾರಿ ಇಲಾಖೆ ವತಿಯಿಂದ ೪೭ ಪ್ರಕರಣಗಳಲ್ಲಿ ವಶಪಡಿಸಿಕೊಳ್ಳಲಾದ ಸುಮಾರು ೧೧೧ ಕೆ.ಜಿ ಮಾದಕದ್ರವ್ಯವನ್ನು ನಿಯಮಾನುಸಾರ ಹೊಸಕೋಟೆ ತಾಲೂಕಿನ ಕೈಗಾರಿಕಾ ಪ್ರದೇಶದಲ್ಲಿ ನಾಶಪಡಿಸಲಾಗಿದೆ ಎಂದು ಬೆಂಗಳೂರು ಗ್ರಾಮಾಂತರ ವಿಭಾಗದ ಅಬಕಾರಿ ಜಂಟಿ ಆಯುಕ್ತರಾದ ಡಾ.ಸಿ.ಎಚ್ ಬಾಲಕೃಷ್ಣ ತಿಳಿಸಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>